# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 72 (124) |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದರು) |
| 3 | ಉತ್ತರಿಸಬೇಕಾದ ದಿನಾಂಕ | 11-08-2025 |
| 4 | ಉತ್ತರಿಸಬೇಕಾದ ಸಚಿವರು | ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಒಟ್ಟು ಎಷ್ಟು Trauma ಸೆಂಟರ್‌ಗಳಿವೆ; (ಜಿಲ್ಲಾವಾರು ವಿವರ ಕೊಡುವುದು) ಈ Trauma ಸೆಂಟರ್‌ಗಳಲ್ಲಿ ಕಳೆದ ಎರಡು ವರ್ಷಗಳಿಂದ ಎಷ್ಟು ಜನರಿಗೆ ತುರ್ತು ಚಿಕಿತ್ಸೆ ನೀಡಲಾಗಿದೆ; | ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಒಟ್ಟು **06 Trauma** ಸೆಂಟರ್‌ಗಳಿವೆ.<br>ಸದರಿ Trauma ಸೆಂಟರ್‌ಗಳಲ್ಲಿ ಕಳೆದ ಎರಡು ವರ್ಷಗಳಿಂದ **350714** ಜನರಿಗೆ ತುರ್ತು ಚಿಕಿತ್ಸೆ ನೀಡಲಾಗಿದೆ.<br>(ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ). |
| ಆ) | ಚಿತ್ರದುರ್ಗ ಜಿಲ್ಲೆಗೆ Trauma ಸೆಂಟರ್ ಅವಶ್ಯಕತೆ ಇದ್ದು ಇದನ್ನು ಮಂಜೂರು ಮಾಡುವ ಬಗ್ಗೆ ಸರ್ಕಾರದ ನಿಲುವೇನು; Trauma ಸೆಂಟರ್ ಮಂಜೂರು ಮಾಡಲು ಅನುಸರಿಸಲಾದ ಮಾನದಂಡಗಳಾವುವು; | 2025-26ನೇ ಸಾಲಿನ ಆಯವ್ಯಯ ಕಂಡಿಕೆ ಸಂಖ್ಯೆ:157 (2) ರಲ್ಲಿ ಚಿತ್ರದುರ್ಗದಲ್ಲಿ ಸುಸಜ್ಜಿತ ಟ್ರಾಮಾ ಕೇರ್ ಕೇಂದ್ರವನ್ನು ಸ್ಥಾಪಿಸಲಾಗುವುದು ಎಂದು ಘೋಷಣೆ ಮಾಡಲಾಗಿದ್ದು , ಅದರಂತೆ ಚಿತ್ರದುರ್ಗ ಜಿಲ್ಲೆಯಲ್ಲಿ ಟ್ರಾಮಾ ಕೇರ್ ಸೆಂಟರ್ ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಕ್ರಮವಹಿಸಲಾಗುತ್ತಿದೆ.<br>Trauma ಸೆಂಟರ್ ಮಂಜೂರು ಮಾಡಲು ಅನುಸರಿಸಲಾದ ಮಾನದಂಡಗಳು ಈ ಕೆಳಕಂಡಂತಿವೆ:<br>1. ಅಪಘಾತ ಹಾಗೂ ತುರ್ತು ಚಿಕಿತ್ಸಾ ಸಂದರ್ಭಗಳಲ್ಲಿ ಸುಸಜ್ಜಿತವಾದ ಚಿಕಿತ್ಸೆ ನೀಡಲು ಟ್ರಾಮಾಕೇರ್ ಸೆಂಟರ್ ಅನ್ನು ನಿರ್ಮಿಸಲಾಗುತ್ತದೆ.<br>2. ರಸ್ತೆ ಅಪಘಾತದಲ್ಲಿ ಸಂಭವಿಸುವ ಸಾವಿನ ಪ್ರಮಾಣ ತಗ್ಗಿಸಲು ರಾಷ್ಟ್ರೀಯ ಹೆದ್ದಾರಿಗಳಲ್ಲಿ ಹಾದುಹೋಗುವ ಸ್ಥಳಗಳ ಸಮೀಪ ಟ್ರಾಮಾಕೇರ್ ಸೆಂಟರ್ ಅನ್ನು ನಿರ್ಮಿಸುವುದು ಸೂಕ್ತವಾಗಿರುತ್ತದೆ.<br>3. ರೋಗಿಗಳನ್ನು ಸಾಗಿಸಲು ಆಂಬುಲೆನ್ಸ್‌ಗಳಿಗೂ ಹಾಗೂ ಆಸ್ಪತ್ರೆಗಳಿಗೂ ಸೂಕ್ತ ಸಂವಹನ ವ್ಯವಸ್ಥೆ ಅವಶ್ಯಕತೆ ಇರುತ್ತದೆ.<br>4. ಶಸ್ತ್ರ ಚಿಕಿತ್ಸಾ ಶಾಸ್ತ್ರ, ಮೂಳೆ ಚಿಕಿತ್ಸಾ ಶಾಸ್ತ್ರ, ತುರ್ತು ಚಿಕಿತ್ಸಾ ಶಾಸ್ತ್ರ, ಅರವಳಿಕೆ ಶಾಸ್ತ್ರ ಹಾಗೂ ನ್ಯೂರೋಸರ್ಜರಿ ಇತ್ಯಾದಿ ವಿಭಾಗಗಳ ವೈದ್ಯರ ಸಮನ್ವಯತೆಯಿಂದ ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತದೆ.<br>5. ಅಪಘಾತ ಮತ್ತು ತುರ್ತು ಚಿಕಿತ್ಸಾ ಕೇಂದ್ರಗಳಲ್ಲಿ Standard Operating Procedure (SOP) ಅನ್ನು ಪಾಲಿಸುವುದು ಹಾಗೂ ಪ್ರೋಟೋಕಾಲ್ ಸಿದ್ಧಪಡಿಸುವುದು.<br>6. ಅಪಘಾತ ಸಂಭವಿಸಿದ ಒಂದು ಗಂಟೆಯ ಒಳಗಾಗಿ (Golden Hour) ಗಾಯಾಳುಗಳನ್ನು ಆಸ್ಪತ್ರೆಗೆ ತರಲು ಅನುಕೂಲವಾಗುವಂತೆ ಅಲ್ಲಿರುವ ಸ್ಥಳೀಯ ಸಾರ್ವಜನಿಕರಿಗೆ ತರಬೇತಿ ನೀಡುವುದು.<br>7. ಟೋಲ್ ಫ್ರೀ ದೂರವಾಣಿ ಸಂಪರ್ಕ ಕಲ್ಪಿಸುವುದು.<br>8. ಸೂಕ್ತ ಪುನರ್ವಸತಿ ಕೇಂದ್ರ ಕಲ್ಪಿಸುವುದು. |

| | | |
|---|---|---|
| ಇ) | ಚಿತ್ರದುರ್ಗ ಜಿಲ್ಲೆ ವೈದ್ಯಕೀಯ ಕಾಲೇಜಿನಲ್ಲಿ ಸಿಬ್ಬಂದಿಗಳ ನೇಮಕಾತಿ ಸಂದರ್ಶನ ಪೂರ್ಣಗೊಂಡಿದ್ದು, ಆಯ್ಕೆ ಪಟ್ಟಿ ಪ್ರಕಟಿಸದಿರಲು ಕಾರಣವೇನು; ಉದ್ಯೋಗಾಕಾಂಕ್ಷಿಗಳಿಗೆ ವಯೋಮಿತಿ ಮೀರುತ್ತಿರುವುದರಿಂದ ಈ ಪ್ರಕ್ರಿಯೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ಸಂಪೂರ್ಣ ವಿವರ ಒದಗಿಸುವುದು) | ಈಗಾಗಲೇ ಸಿ.ಎಂ.ಸಿ.ಆರ್.ಐ., ಚಿತ್ರದುರ್ಗ ಸಂಸ್ಥೆಯಲ್ಲಿ ಪ್ರಾಧ್ಯಾಪಕರು/ಸಹ ಪ್ರಾಧ್ಯಾಪಕರು ಒಟ್ಟು 46 ಹುದ್ದೆಗಳ ನೇಮಕಾತಿಗಾಗಿ ದಿನಾಂಕ:18.12.2024ರಂದು ಅಧಿಸೂಚನೆಯನ್ನು ಹೊರಡಿಸಿ, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನೇಮಕಾತಿ ಸಮಿತಿಯನ್ನು ರಚಿಸಿದ್ದು, ದಿನಾಂಕ:12.02.2025 ಮತ್ತು ದಿನಾಂಕ:13.02.2025ರಂದು ಎರಡು ದಿನ ಸಂದರ್ಶನವನ್ನು ಏರ್ಪಡಿಸಿ ಅಭ್ಯರ್ಥಿಗಳಿಗೆ ಸಂದರ್ಶನ ಪ್ರಕ್ರಿಯೆ ಕೈಗೊಂಡು Merit Cum Roster ಆಧಾರದ ಮೇಲೆ ಸರ್ಕಾರದ ನಿಯಮ ಹಾಗೂ ರಾಷ್ಟ್ರೀಯ ವೈದ್ಯಕೀಯ ಆಯೋಗದ ಮಾನದಂಡಗಳನ್ವಯ ಒಟ್ಟು 36 ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಂಡು ದಿನಾಂಕ:06.05.2025ರಂದು ಸಂಸ್ಥೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ ಅರ್ಹ ಬೋಧಕರಿಗೆ ನೇಮಕಾತಿ ಆದೇಶವನ್ನು ನೀಡಲಾಗಿದೆ. |

**ಸಂಖ್ಯೆ:ಎಂಇಡಿ 635 ಎಂಪಿಎಸ್ 2025**

ಡಾ|| ಶರಣ ಪ್ರಕಾಶ ಆರ್. ಪಾಟೀಲ್
ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ
ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು

**ಅನುಬಂಧ-1**

**ಶ್ರೀ ಕೆ.ಎಸ್.ನವೀನ್ ಇವರ ಪ್ರಶ್ನೆ ಸಂಖ್ಯೆ:172 ಕ್ಕೆ ಸಂಬಂಧಿಸಿದಂತೆ**

| ಕ್ರ. ಸಂ | ಸಂಸ್ಥೆಯ ಹೆಸರು | ಟ್ರಾಮ ಕೇರ್ ಸೆಂಟರ್ ಇದೆಯೆ/ಇಲ್ಲವೇ | ಕಳೆದ ಎರಡು ವರ್ಷಗಳಿಂದ ತುರ್ತು ಚಿಕಿತ್ಸೆ ಪಡೆದ ರೋಗಿಗಳ ವಿವರ |
|---|---|---|---|
| 1 | ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು | ಇದೆ | 171631 |
| 2 | ಮೈಸೂರು, ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಮೈಸೂರು | ಇದೆ | 79347 |
| 3 | ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಹುಬ್ಬಳ್ಳಿ | ಇದೆ | 26967 |
| 4 | ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬಳ್ಳಾರಿ. | ಇದೆ | 52643 |
| 5 | ಬೀದರ್ ವೈದ್ಯಕೀಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ | ಇಲ್ಲ | 0 |
| 6 | ರಾಯಚೂರು ವೈದ್ಯಕೀಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು | ಇಲ್ಲ | 0 |
| 7 | ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ. | ಇದೆ | 9038 |
| 8 | ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ. | ಇಲ್ಲ | 0 |
| 9 | ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ | ಇಲ್ಲ | 0 |
| 10 | ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ | ಇಲ್ಲ | 0 |
| 11 | ಚಾಮರಾಜನಗರ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ | ಇಲ್ಲ | 0 |
| 12 | ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಡಗು | ಇಲ್ಲ | 0 |
| 13 | ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಲಬುರಗಿ | ಇದೆ | 11088 |
| 14 | ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ | ಇಲ್ಲ | 0 |
| 15 | ಕೆ.ಹೆಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಗದಗ | ಇಲ್ಲ | 0 |
| 16 | ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ | ಇಲ್ಲ | 0 |
| 17 | ಶ್ರೀ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು | ಇಲ್ಲ | 0 |
| 18 | ನಂದಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಚಿಕ್ಕಬಳ್ಳಾಪುರ | ಇಲ್ಲ | 0 |
| 19 | ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾವೇರಿ | ಇಲ್ಲ | 0 |
| 20 | ಯಾದಗಿರಿ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಯಾದಗಿರಿ | ಇಲ್ಲ | 0 |
| 21 | ಚಿಕ್ಕಮಗಳೂರು, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿಕ್ಕಮಗಳೂರು | ಇಲ್ಲ | 0 |
| 22 | ಚಿತ್ರದುರ್ಗ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿತ್ರದುರ್ಗ | ಇಲ್ಲ | 0 |
| 23 | ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು | ಇಲ್ಲ | 0 |
| 25 | ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು | ಇಲ್ಲ | 0 |
| 26 | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು | ಇಲ್ಲ | 0 |
| 27 | ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ, ಬೆಂಗಳೂರು. | ಇಲ್ಲ | 0 |
| 28 | ನೆಫ್ರೋ-ಯುರಾಲಜಿ ಸಂಸ್ಥೆ, ಬೆಂಗಳೂರು | ಇಲ್ಲ | 0 |
| 29 | ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ, ಧಾರವಾಡ | ಇಲ್ಲ | 0 |

| ಕ್ರ. ಸಂ | ಸಂಸ್ಥೆಯ ಹೆಸರು | ಟ್ರಾಮ ಕೇರ್ ಸೆಂಟರ್ ಇದೇಯೆ/ಇಲ್ಲವೇ | ಕಳೆದ ಎರಡು ವರ್ಷಗಳಿಂದ ತುರ್ತು ಚಿಕಿತ್ಸೆ ಪಡೆದ ರೋಗಿಗಳ ವಿವರ |
|---|---|---|---|
| 30 | ಎಸ್ ಡಿ ಎಸ್ ಟಿ ಬಿ ಹಾಗೂ ರಾಜೀವ್ ಗಾಂಧಿ ಎದೆರೋಗಗಳ ಸಂಸ್ಥೆ, ಬೆಂಗಳೂರು | ಇಲ್ಲ | 0 |
| 31 | ಸಂಜಯ್‌ಗಾಂಧಿ ಟ್ರಾಮ ಮತ್ತು ಅಸ್ಥಿ ಚಿಕಿತ್ಸಾ ಸಂಸ್ಥೆ, ಬೆಂಗಳೂರು | ಇಲ್ಲ | 0 |
| 32 | ರಾಜೀಗ್‌ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ (ಒಪೆಕ್) ರಾಯಚೂರು | ಇಲ್ಲ | 0 |
| 33 | ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಎಂಡೋಕ್ರೈನಾಲಜಿ ಅಂಡ್ ರೀಸರ್ಚ್, ಬೆಂಗಳೂರು. | ಇಲ್ಲ | 0 |
| 34 | ಗ್ಯಾಸ್ಟ್ರೋಎಂಟ್ರಾಲಜಿ ಸೈನ್ಸಸ್ ಅಂಡ್ ಆರ್ಗನ್ ಟ್ರಾನ್ಸ್‌ಪ್ಲಾಂಟ್ ಸಂಸ್ಥೆ, ಬೆಂಗಳೂರು | ಇಲ್ಲ | 0 |
| ಒಟ್ಟು | | 6 | 350714 |

ನಿರ್ದೇಶಕರು,
ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು.